ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತ
BANGALORE METRO RAIL CORPORATION LIMITED

ಸಂಖ್ಯೆ: ಬಿಎಂಆರ್‌ಸಿಎಲ್/ ಮುಸಾಸಂಅ/_ಮಾಧ್ಯಮ ಪ್ರಕಟಣೆ/2023-24 ದಿನಾಂಕ: 07.07.2023

# ಮಾಧ್ಯಮ ಪ್ರಕಟಣೆ

**ವಿಷಯ: ದಿ 10.07.2023 ಸೋಮವಾರದಿಂದ 09.08.2023 ಬುಧವಾರದವರೆಗೆ ಬೆಳಿಗ್ಗೆ 05.00 ಗಂಟೆಯಿಂದ 7.00 ಗಂಟೆವರೆಗೆ ಬೈಯಪ್ಪನಹಳ್ಳಿ ಮತ್ತು ಎಸ್.ವಿ ರಸ್ತೆ ಹಾಗೂ ಕೃಷ್ಣರಾಜಪುರ ಮತ್ತು ವೈಟ್‌ಫೀಲ್ಡ್ (ಕಾಡುಗೋಡಿ) ನಿಲ್ದಾಣಗಳ ನಡುವೆಯ ಮೆಟ್ರೋ ರೈಲು ಸೇವೆ ಸ್ಥಗಿತ.**

ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತವು ನೇರಳೆ ಮಾರ್ಗದಲ್ಲಿನ ಬೈಯಪ್ಪನಹಳ್ಳಿ ಮತ್ತು ಕೃಷ್ಣರಾಜಪುರ ಮೆಟ್ರೋ ನಿಲ್ದಾಣಗಳನ್ನು ಸಂಪರ್ಕವನ್ನು ಕಲ್ಪಿಸಲು ಸಿಗ್ನಲಿಂಗ್ ಹಾಗೂ ಇತರ ಸಂಬಂಧಿತ ಕಾಮಗಾರಿ ಕೈಗೊಳ್ಳುತ್ತಿದ್ದು. ಸದರಿ ಕಾಮಗಾರಿಗಾಗಿ ದಿ.:10.07.2023 ಸೋಮವಾರದಿಂದ 09.08.2023 ಬುಧವಾರದವರೆಗೆ ಬೆಳಿಗ್ಗೆ 05.00 ಗಂಟೆಯಿಂದ 7.00 ಗಂಟೆವರೆಗೆ ಈ ಕೆಳಗಿನ ನಿಲ್ದಾಣಗಳ ನಡುವೆಯ ಮೆಟ್ರೋ ರೈಲುಗಳ ಸೇವೆಯನ್ನು ಸ್ಥಗಿತಗೊಳಿಸಲಾಗುತ್ತದೆ.

1. ಬೈಯಪ್ಪನಹಳ್ಳಿ ಮತ್ತು ಎಸ್.ವಿ. ರಸ್ತೆ
2. ಕೃಷ್ಣರಾಜಪುರ ಮತ್ತು ವೈಟ್‌ಫೀಲ್ಡ್ (ಕಾಡುಗೋಡಿ).

ಆದಾಗ್ಯೂ, ಸ್ವಾಮಿ ವಿವೇಕಾನಂದ ರಸ್ತೆ (ಬೈಯಪ್ಪನಹಳ್ಳಿ ನಿಲ್ದಾಣದ ಮೊದಲು ಒಂದು ನಿಲ್ದಾಣ) ಮತ್ತು ಕೆಂಗೇರಿ ನಿಲ್ದಾಣಗಳ ನಡುವೆ ರೈಲು ಸೇವೆಗಳು ಬೆಳಗ್ಗೆ 5.00 ಗಂಟೆಯಿಂದ 7.00 ಗಂಟೆಯವರೆಗೆ ಲಭ್ಯವಿರುತ್ತದೆ.

ಬೆಳಿಗ್ಗೆ 7.00 ಗಂಟೆಯ ನಂತರ, ಬೈಯಪ್ಪನಹಳ್ಳಿ ಮತ್ತು ಕೆಂಗೇರಿ ಹಾಗೂ ಕೃಷ್ಣರಾಜಪುರ ಮತ್ತು ವೈಟ್‌ಫೀಲ್ಡ್ (ಕಾಡುಗೋಡಿ) ಮೆಟ್ರೋ ನಿಲ್ದಾಣಗಳ ನಡುವೆ ವಾಣಿಜ್ಯ ರೈಲು ಸೇವೆಗಳು ಎಂದಿನಂತೆ ರಾತ್ರಿ 11.00 ಗಂಟೆಯವರೆಗೆ ಲಭ್ಯವಿರುತ್ತವೆ.

ಹಸಿರು ಮಾರ್ಗದ ರೈಲು ಸೇವೆಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

ನಮ್ಮ ಮೆಟ್ರೋ ಪ್ರಯಾಣಿಕರು ಸದರಿ ಬದಲಾವಣೆಯನ್ನು ಗಮನಿಸಬೇಕೆಂದು ಕೋರಿದೆ. ಪ್ರಯಾಣಿಕರಿಗೆ ಇದರಿಂದಾಗುವ ಅನಾನುಕೂಲತೆಗೆ ವಿಷಾದಿಸಿದೆ.

**ಸಹಿ/-**
**ಮುಖ್ಯ ಸಾರ್ವಜನಿಕ ಸಂಪರ್ಕ ಅಧಿಕಾರಿ**

Phone: +91-(0)80-22969300 / 22969301, Fax: +91-(0)80-22969222, GST No.: AACB4881D
E-mail: contactus@bmrc.co.in Web: www.bmrc.co.in, CIN No.: U16286KA1994GOI016286